**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ,</u>**

**<u>ಪಿರಿಯಾಪಟ್ಟಣ.</u>**

**ಸಿ ಸಿ ಸಂಃ 446/2019**

| | | |
|---|---|---|
| ಸಾಕ್ಷಿಯ ಹೆಸರುಃ | ಮೋಹನ | ಫ್ರಾಸಾಃಃ 3 |
| ತಂದೆ ಹೆಸರುಃ | ಸೋಮಪ್ಪ | ಚಾಸಾಃಃ 3 |
| ವಯಸ್ಸುಃ | 32 ವರ್ಷ | ಪ್ರಮಾಣೀಕರಿಸಿದ<br>ದಿಃ 28/11/2023 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಆವರ್ತಿ ಗ್ರಾಮ,<br>ಪಿರಿಯಾಪಟ್ಟಣ ತಾಲ್ಲೂಕು. | |

**<u>ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ</u>**

ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾರನ್ನೂ ದಸ್ತಗಿರಿ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಾನು ಯಾವುದೋ ಕೆಲಸದ ನಿಮಿತ್ತ ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರು ನನ್ನ ಸಹಿಯನ್ನು ಒಂದು ದಾಖಲೆಯ ಮೇಲೆ ಪಡೆದುಕೊಂಡಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ.1ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು,ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.1(ಸಿ)** ಎಂದು ಗುರುತಿಸಲಾಯಿತು. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಸಸಅ ರವರಿಂದಃ</u>**

ದಿಃ 19/02/2017 ರಂದು ಬೆಳಿಗ್ಗೆ 5.00 ರಿಂದ 6.00 ಗಂಟೆಯವರೆಗೆ ಪೊಲೀಸರು ಸ್ಥಳ ಮಹಜರ್ ಕ್ರಮ ಜರುಗಿಸಿ, ಎರಡು ಬಾಂಡಲಿ, ಎರಡು ಗುದ್ದಲಿ ಹಾಗೂ ಮರಳು ತುಂಬಿದ ಟ್ರಾಕ್ಟರ್ ನ್ನು ಅಮಾನತ್ತು ಪಡಿಸಿಕೊಂಡು, ಸ್ಥಳದಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಈಗ ನನಗೆ ಓದಿ ಹೇಳಿದಂತೆ ''ದಿನಾಂಕಃ19/02/2017 ರಂದು ಬೆಳಿಗಿನ ಜಾವ ............................ಸಾಗಾಟ ಮಾಡಲು ತುಂಬುತ್ತಿದ್ದವರಾಗಿರುತ್ತಾರೆ'' ಎಂದು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು **ನಿಪಿ.4** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ</u>** ಇಲ್ಲ.

**ಮರು ವಿಚಾರಣೆಃ** ಇಲ್ಲ.

**<u>ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು</u>**
**<u>ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.</u>**

**ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**